DFA/1004485

## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 1444
ಸದಸ್ಯರ ಹೆಸರು : ಶ್ರೀ ಡಿ.ಎಸ್. ಅರುಣ್
ಉತ್ತರಿಸುವ ಸಚಿವರು : ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರು
ಉತ್ತರಿಸುವ ದಿನಾಂಕ : 30.12.2022

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಡಿಸೆಂಬರ್-2020ನೇ ಸಾಲಿನಲ್ಲಿ ಸಾರಿಗೆ ನೌಕರರು ಮುಷ್ಕರ ಕೈಗೊಂಡ ಸಮಯದಲ್ಲಿ ವಜಾಗೊಂಡ ನೌಕರರನ್ನು ಪುನರ್ ನೇಮಕ ಮಾಡಿಕೊಳ್ಳುವ ಕುರಿತು ಸರ್ಕಾರ ಚಿಂತಿಸಿದೆಯೇ; | ಡಿಸೆಂಬರ್-2020ನೇ ಸಾಲಿನಲ್ಲಿ ಸಾರಿಗೆ ನೌಕರರು ಮುಷ್ಕರ ಕೈಗೊಂಡ ಸಮಯದಲ್ಲಿ ನಾಲ್ಕೂ ಸಾರಿಗೆ ಸಂಸ್ಥೆಗಳಿಂದ ಯಾವುದೇ ನೌಕರರನ್ನು ವಜಾ ಮಾಡಿರುವುದಿಲ್ಲ. |
| ಆ | ನೌಕರರ ಬೇಡಿಕೆಯಾದ ವೇತನ ಆಯೋಗದ ಶಿಫಾರಸ್ಸುಗಳನ್ನು ಈಡೇರಿಸುವಂತೆ ನೌಕರರ ಒಕ್ಕೂಟ, ಈ ಹಿಂದೆ ಹೂಡಿದ್ದ ಮುಷ್ಕರಕ್ಕೆ ಸರ್ಕಾರದ ನಿಲುವೇನು; | ರಾಜ್ಯದ ನಾಲ್ಕು ರಸ್ತೆ ಸಾರಿಗೆ ಸಂಸ್ಥೆಗಳ ನೌಕರರ ವೇತನವನ್ನು ಪ್ರತಿ ನಾಲ್ಕು ವರ್ಷಗಳಿಗೊಮ್ಮೆ ಪರಿಷ್ಕರಿಸುವ ಪದ್ಧತಿ ಜಾರಿಯಲ್ಲಿದ್ದು, ಪ್ರಸ್ತುತ ದಿನಾಂಕ:01.01.2020 ರಿಂದ ಹೊಸ ವೇತನ ಪರಿಷ್ಕರಣೆ ಆಗಬೇಕಿರುತ್ತದೆ.<br><br>ಈ ಕುರಿತು ನಿಗಮದ ಪ್ರಮುಖ ಕಾರ್ಮಿಕ ಸಂಘಟನೆಗಳು ಬೇಡಿಕೆಗಳ ಪಟ್ಟಿಯನ್ನು 2019ರ ಡಿಸೆಂಬರ್ ಅಂತ್ಯದಲ್ಲಿ ನೀಡಿದ್ದು, ತತ್ಸಂಬಂಧ ಪ್ರಾಥಮಿಕ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿತ್ತು. ಆದರೆ ಈ ಮಧ್ಯೆ, ರಾಜ್ಯ ರಸ್ತೆ ಸಾರಿಗೆ ನೌಕರರನ್ನು ರಾಜ್ಯ "ಸರ್ಕಾರಿ ನೌಕರ"ರೆಂದು ಪರಿಗಣಿಸಬೇಕು ಮತ್ತು ಸರ್ಕಾರಿ ನೌಕರರಿಗೆ ಸಿಗುವ ಎಲ್ಲಾ ಸೌಲಭ್ಯಗಳನ್ನು ತಮಗೆ ನೀಡಬೇಕು ಮತ್ತು ಆರನೇ ವೇತನ ಆಯೋಗದ ಶಿಫಾರಸ್ಸುಗಳನ್ನು ಅಳವಡಿಸಿಕೊಳ್ಳಬೇಕು ಎಂಬ ಇತ್ಯಾದಿ ಬೇಡಿಕೆಗಳನ್ನು ಈಡೇರಿಸುವಂತೆ ನಿಗಮಗಳ ನೌಕರರ ಕೆಲವು ಒಕ್ಕೂಟಗಳು ಮುಷ್ಕರ ಹೂಡಿರುತ್ತಾರೆ.<br><br>ಈ ಹಂತದಲ್ಲಿ ಕೋವಿಡ್-19 ಸಾಂಕ್ರಾಮಿಕ ರೋಗವು ಸಹ ರಾಜ್ಯದಲ್ಲಿ ವ್ಯಾಪಕವಾಗಿ ಹರಡಿ, ಕ್ರಮೇಣ ನಿಗಮಗಳ ಬಸ್ಸುಗಳ ಆಚರಣೆಯನ್ನು ಸ್ಥಗಿತಗೊಳಿಸಿರುವುದು, ಪರಿಣಾಮವಾಗಿ |



Generated from eOffice by B SREERAMULU, TD-MIN(BS), TRANSPORT MINISTER, Trans on 27/12/2022 06:33 PM

| | | |
|---|---|---|
| | | ನಿಗಮಗಳಿಗೆ ಯಾವುದೇ ಸಾರಿಗೆ ಆದಾಯ ಬಾರದೇ ನೌಕರರ ವೇತನ ನೀಡಲು ಸಹ ಆರ್ಥಿಕ ಮುಗ್ಗಟ್ಟು ಎದುರಾಗಿದ್ದರಿಂದ, ವೇತನ ಪರಿಷ್ಕರಣೆ ಆಗಿರುವುದಿಲ್ಲ.<br><br>ಈ ಅನಿವಾರ್ಯ ಸಂದರ್ಭದಲ್ಲಿ ರಾಜ್ಯ ಸರ್ಕಾರವು ನೌಕರರ ವೇತನ ಪಾವತಿಗಾಗಿ ಅನುದಾನವನ್ನು ಬಿಡುಗಡೆ ಮಾಡಿ ಅನುಕೂಲ ಮಾಡಿಕೊಟ್ಟಿರುತ್ತದೆ.<br><br>ಸಾರಿಗೆ ಸಂಸ್ಥೆಗಳ ನೌಕರರ ವೇತನ ಪರಿಷ್ಕರಣೆಗೆ ಸಂಬಂಧಿಸಿದಂತೆ ನಾಲ್ಕೂ ಸಾರಿಗೆ ಸಂಸ್ಥೆಗಳ ವ್ಯವಸ್ಥಾಪಕರ ನಿರ್ದೇಶಕರುಗಳನ್ನೊಳಗೊಂಡ ಆಂತರಿಕ ಸಮಿತಿಯು ಸರ್ಕಾರಕ್ಕೆ ಸಲ್ಲಿಸಿರುವ ವರದಿಯು ಸರ್ಕಾರದ ಪರಿಶೀಲನೆಯಲ್ಲಿರುತ್ತದೆ. |
| ಇ | ಸಾರಿಗೆ ನಿಗಮಗಳಲ್ಲಿ 1992ರ ನಂತರ ಇದುವರೆಗೂ ಕಾರ್ಮಿಕ ಸಂಘಟನೆಗಳ ಚುನಾವಣೆ ನಡೆಯದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಈ ಬಗ್ಗೆ ಸರ್ಕಾರ ತೆಗೆದುಕೊಂಡ ನಿಲುವೇನು; | ಸರ್ಕಾರದ ಗಮನಕ್ಕೆ ಬಂದಿದೆ.<br><br>ಕಾರ್ಮಿಕ ಸಂಘಟನೆಗಳ ಚುನಾವಣೆ ಪ್ರಕ್ರಿಯೆಯ ಕುರಿತು ಕ.ರಾ.ರ.ಸಾ.ನಿಗಮದಿಂದ ನಿಯಮಾನುಸಾರ ಪರಿಶೀಲಿಸಲಾಗುವುದು. |
| ಈ | 2020ರ ಸಾರಿಗೆ ನೌಕರರ ಮುಷ್ಕರದ ಸಮಯದಲ್ಲಿ ನಾಲ್ಕು ನಿಗಮಗಳ (KSRTC, BMTC, ವಾಯುವ್ಯ ಸಾರಿಗೆ, ಈಶಾನ್ಯ ಸಾರಿಗೆ ) ನೌಕರರು ಹಾಗೂ ಅವರ ಕುಟುಂಬದ ಮೇಲೆ ಸುಳ್ಳು ಪೊಲೀಸ್ ಕೇಸ್ ದಾಖಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | 2020ರ ಸಾರಿಗೆ ನೌಕರರ ಮುಷ್ಕರದ ಸಮಯದಲ್ಲಿ ನಾಲ್ಕೂ ಸಾರಿಗೆ ಸಂಸ್ಥೆಗಳ ನೌಕರರ ಹಾಗೂ ಅವರ ಕುಟುಂಬದ ಮೇಲೆ ಯಾವುದೇ ಸುಳ್ಳು ಪೊಲೀಸ್ ಪ್ರಕರಣ ದಾಖಲಾಗಿರುವುದಿಲ್ಲ. |

ಸಂಖ್ಯೆ: ಟಿಡಿ 342 ಟಿಸಿಕ್ಯೂ 2022

(ಬಿ. ಶ್ರೀರಾಮುಲು)
ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ
ಕಲ್ಯಾಣ ಸಚಿವರು



Generated from eOffice by B SREERAMULU, TD-MIN(BS), TRANSPORT MINISTER, Trans on 27/12/2022 06:33 PM